28.06.2024

ಆಕಾಶವಾಣಿ

ಪ್ರದೇಶ ಸಮಾಚಾರ

ಓದುತ್ತಿರುವವರು: ವಿವೇಕಾದಿತ್ಯ ಕನಿಯಾಲ

<><><>

ಮುಖ್ಯಾಂಶಗಳು:

<><><>

- ರಾಜ್ಯದ  ಅಬಿವೃದ್ಧಿ ಯೋಜನೆಗಳ ಬಗ್ಗೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ–ಇಂದು ವಿವಿಧ ಕೇಂದ್ರ ಸಚಿವರ ಭೇಟಿ
- ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಕೃಷಿಯ ಕೊಡುಗೆ ಅಮೂಲ್ಯ–ರಾಜ್ಯಪಾಲ ಥಾವರಚಂದ್ ಗೆಹ್ಲೋಟ್
- ಸಡಗರ, ಸಂಭ್ರಮದೊಂದಿಗೆ ರಾಜ್ಯಾದ್ಯಂತ ನಿನ್ನೆ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ
- ರಾಜ್ಯದ ವಿವಿಧೆಡೆ ಮುಂದುವರಿದ ಮಳೆ– ಜನಜೀವನ ಅಸ್ತವ್ಯಸ್ತ

<><><>

ಈಗ ವಾರ್ತೆಗಳ ವಿವರ

<><><>

ಪ್ರದೇಶ ಸಮಾಚಾರ

28.06.2024

ಸಿ.ಎಂ ದೆಹಲಿ ಭೇಟಿ

ರಾಜ್ಯದ ಅಭಿವೃದ್ಧಿ ಯೋಜನೆಗಳ ಕುರಿತು ವಿವಿಧ ಇಲಾಖೆ ಸಚಿವರೊಂದಿಗೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ನವದೆಹಲಿ ತೆರಳಿದ್ದಾರೆ.

ರಾಜ್ಯದಿಂದ ಆಯ್ಕೆಯಾದ ನೂತನ ಲೋಕಸಭಾ ಹಾಗೂ ರಾಜ್ಯಸಭಾ ಸಂಸದರ ಜೊತೆ ಸಭೆ ನಡೆಸಿದ ಮುಖ್ಯಮಂತ್ರಿಯವರು ರಾಜ್ಯದ ಎಲ್ಲಾ ಬೇಡಿಕೆ, ಯೋಜನೆ, ಪ್ರಸ್ತಾವನೆಗಳ ಮಂಜೂರಾತಿಗೆ ಮನವಿ ಮಾಡಿದರು. ರಾಜ್ಯದ ಅಭಿವೃದ್ಧಿ ನಮ್ಮ ಗುರಿ, ಇದರಲ್ಲಿ ರಾಜಕೀಯ, ಟೀಕೆ ಆರೋಪಗಳ ಅಗತ್ಯವಿಲ್ಲ, ರಾಜ್ಯದ ಅಭಿವೃದ್ಧಿಗೆ ಸೌಹಾರ್ದಯುತವಾಗಿ ಪ್ರಯತ್ನಿಸೋಣ ಎಂದರು.

ನಾಡಿನ ಅಭಿವೃದ್ಧಿ ಹಿತದೃಷ್ಟಿಯಿಂದ ಸಂಸತ್ತಿನ ಒಳಗೆ ಹಾಗೂ ಹೊರಗೆ ಈ ಬಗ್ಗೆ ಧ್ವನಿ ಎತ್ತಬೇಕೆಂದು ಇದೇ ವೇಳೆ ಸಂಸದರನ್ನು ಕೋರಿದರು. ಮೇಕೆದಾಟು ಯೋಜನೆಗೆ ಕೇಂದ್ರದ ಅನುಮತಿ ಅಗತ್ಯವಿದೆ. ಭದ್ರಾ ಯೋಜನೆ ಬಗ್ಗೆಯೂ ಪ್ರಯತ್ನ ಮುಂದುವರಿಸಬೇಕಿದೆ, ಕಲ್ಯಾಣ ಕರ್ನಾಟಕದ ರಾಯಚೂರಿಗೆ ಏಮ್ಸ್ ನೀಡಲು ಮನವಿ ಸಲ್ಲಿಸಿದ್ದೇವೆ.

ನಾಳೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಬೇಟಿ ಮಾಡಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯಕ್ಕೆ ಸಂಬಂಧಿಸಿದ ವಿವಿಧ ವಿಚಾರಗಳ ಬಗ್ಗೆ ಚರ್ಚಿಸಲಿದ್ದಾರೆ.

ವಿವೇಕ್/ಉಮೇಶ್/ಸಿದ್ದರಾಮಯ್ಯ ಎಕ್ಸ್ ಖಾತೆ

ಪ್ರದೇಶ
ಸಮಾಚಾರ
28.06.2024
ಕೃಷಿ ವಿವಿ ಘಟಿಕೋತ್ಸವ

ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಕೃಷಿಯ ಕೊಡುಗೆ ಅಮೂಲ್ಯವಾಗಿದೆ. ಈ ದಿಶೆಯಲ್ಲಿ ಕೃಷಿ ಪದವೀಧರರಿಗೆ ಬೇಡಿಕೆ ಹೆಚ್ಚಿದೆ. ಮೂಲಸೌಕರ್ಯ ಮತ್ತು ಮಾಹಿತಿ ತಂತ್ರಜ್ಞಾನದ ಬಳಕೆ ಮಾಡುವ ಮೂಲಕ ಕೃಷಿಯಲ್ಲಿ ಹೆಚ್ಚಿನ ಇಳುವರಿ ಸಾಧ್ಯ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ಧಾರವಾಡದ ಕೃಷಿ ವಿಶ್ವವಿದ್ಯಾಲಯದ 37 ನೇ ಘಟಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಸಂದರ್ಭ 69 ಪಿ.ಎಚ್.ಡಿ, 237 ಸ್ನಾತಕೋತ್ತರ ಹಾಗೂ 627 ಪದವಿಗಳನ್ನೊಳಗೊಂಡಂತೆ ಒಟ್ಟು 933 ಜನ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು.

ಹೈಡ್ರೋಫೋನಿಕ್ಸ್ ಮತ್ತು ಎರೋಫೋನಿಕ್ಸ್ ಕೃಷಿ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ದೇಶದ ಕೃಷಿ ಆರ್ಥಿಕಮಟ್ಟ ಸುಧಾರಿಸಬೇಕೆಂದು ಪದವೀಧರರಿಗೆ ಅವರು ಕರೆ ನೀಡಿದರು.

ಸಮಾರಂಭದ ಮುಖ್ಯ ಅತಿಥಿಯಾಗಿದ್ದ, ನವದೆಹಲಿಯ ಕೃಷಿ ವಿಜ್ಞಾನಿಗಳ ನೇಮಕಾತಿ ಮಂಡಳಿ ಅಧ್ಯಕ್ಷ, ಡಾಕ್ಟರ್ ಸಂಜಯ ಕುಮಾರ್ ಮಾತನಾಡಿ ಕುಗ್ಗುತ್ತಿರುವ ಭೂ ಹಿಡುವಳಿಯ ಗಾತ್ರವು ಕೃಷಿಗೆ ಸವಾಲಾಗಿವೆ. ಈ ಸಂದರ್ಭ ವಾತಾವರಣಕ್ಕೆ ತಕ್ಕುದಾದ ತಳಿಗಳು, ಮೌಲ್ಯವರ್ಧನೆ, ಮಾರುಕಟ್ಟೆ ಸೌಲಭ್ಯ, ಸಂಸ್ಕರಣಾ ತಂತ್ರಜ್ಞಾನ, ಮಾಹಿತಿ ತಂತ್ರಜ್ಞಾನದ ಅಳವಡಿಕೆ ಮೊದಲಾದವುಗಳು ಕೃಷಿ ಪದವೀಧರರ ಆದ್ಯತಾ ವಲಯಗಳಾಗಬೇಕು ಎಂದು ಹೇಳಿದರು.

ವಿವೇಕ್/ಉಮೇಶ್/ ಕೃಷಿ ವಿವಿ /ವಾರ್ತಾ ಇಲಾಖೆ

ಪ್ರದೇಶ ಸಮಾಚಾರ
28.06.2024
ಕೃಷಿ ವಿವಿ /ಚಲುವರಾಯ ಸ್ವಾಮಿ

ಕೃಷಿ ವಿಶ್ವವಿದ್ಯಾಲಯಗಳು ರೈತರಿಗೆ ಆತ್ಮವಿಶ್ವಾಸ ತುಂಬುವ ಜೊತೆಗೆ ವೈಜ್ಞಾನಿಕ, ತಾಂತ್ರಿಕ ನೆರವು ಒದಗಿಸಬೇಕು ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಸಲಹೆ ನೀಡಿದ್ದಾರೆ.

ಧಾರವಾಡ ಕೃಷಿ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೃಷಿ ಪದವೀಧರರು ತಮ್ಮ ತಾಂತ್ರಿಕ ಜ್ಞಾನ ಬಳಸಿ ನಾಡಿನ ಸರ್ವತೋಮುಖ ಏಳಿಗೆಗೆ ಶ್ರಮಿಸಬೇಕು. ಕೃಷಿ ಕ್ಷೇತ್ರದಲ್ಲಿ ಮೌಲ್ಯವರ್ಧನೆ ಹಾಗೂ ಅಭಿವೃದ್ಧಿಗೆ ವ್ಯಾಪಕ ಅವಕಾಶ ಇದೆ. ಕೃಷಿ ಪದವಿಧರರು ತಮ್ಮ ಕೌಶಲ್ಯವನ್ನು ಈ ಕ್ಷೇತ್ರದ ವಿಕಾಸಕ್ಕೆ ಬಳಸಬೇಕು ಎಂದು ಹೇಳಿದರು.

ಕೃಷಿ ಕ್ಷೇತ್ರದ ಶ್ರೇಯೋಭಿವೃದ್ಧಿಗೆ ಸರ್ಕಾರ ಅನೇಕ ಪರಿಣಾಮಕಾರಿ ಯೋಜನೆಗಳನ್ನು ಜಾರಿಗೊಳಿಸಿದೆ. ಸುಧಾರಿತ ಹೊಸ ತಳಿಯ ಬಿತ್ತನೆ ಬೀಜಗಳು ಎಲ್ಲ ರೈತರಿಗೂ ದೊರೆಯುವ ನಿಟ್ಟಿನಲ್ಲಿ ಹೊಸ ಮೊಬೈಲ್ ಆಪ್ ಸಿದ್ಧಪಡಿಸಿದೆ. ರೈತರ ಮನೆಬಾಗಿಲಿಗೆ ಬೀಜ ತಲುಪಿಸುವ ಯೋಜನೆ ಶೀಘ್ರವೇ ಜಾರಿಗೆ ಬರಲಿದೆ ಎಂದು ಸಚಿವರು ತಿಳಿಸಿದರು.

ವಿವೇಕ್/ರವಿ/ಧಾರವಾಡ ಪಿಟಿಸಿ

ಪ್ರದೇಶ ಸಮಾಚಾರ
28.06.2024
ದಾವಣಗೆರೆ/ವಜ್ರಮಹೋತ್ಸವ

60 ವರ್ಷ ಪೂರೈಸಿದ ದಾವಣಗೆರೆ ದೃಶ್ಯಕಲಾ ಮಹಾವಿದ್ಯಾಲಯದ ವಜ್ರಮಹೋತ್ಸವದ ಅಂಗವಾಗಿ ವರ್ಷ ಪೂರ್ತಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಡಿ.ಕುಂಬಾರ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ನಿನ್ನೆ ಈ ವಿಷಯ ತಿಳಿಸಿದ ಅವರು, ಚಿತ್ರಕಲಾ ಸ್ಪರ್ಧೆಗಳು, ಲಲಿತಕಲಾ ಅಕಾಡೆಮಿ ಶಿಬಿರಗಳು, ಡಿಜಿಟಲ್ ಕಲಾ ಕಾರ್ಯಾಗಾರಗಳು, ರಾಜ್ಯಮಟ್ಟದ ಕಲಾ ಶಿಕ್ಷಕರು ಮತ್ತು ಅಧ್ಯಾಪಕರಿಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ದೃಶ್ಯಕಲಾ ಶಿಕ್ಷಣದಲ್ಲಿ ಕೃತಕ ಬುದ್ದಿಮತ್ತೆ ಉಪಯೋಗಿಸಿಕೊಂಡು ಕಲಾ ಶಿಕ್ಷಣವನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ದಾವಣಗೆರೆ ವಿಶ್ವವಿದ್ಯಾಲಯ ಚಿಂತನೆ ನಡೆಸಿದೆ ಎಂದು ಅವರು ಹೇಳಿದರು.

ದಾವಣಗೆರೆ ಪಿಟಿಸಿ/ರವಿ

ಪ್ರದೇಶ ಸಮಾಚಾರ

28.06.2024

ಕೆ.ಜೆ.ಜಾರ್ಜ

ಬೆಂಗಳೂರಿನ ಯಲಹಂಕ ಬಳಿ ಸ್ಥಾಪಿಸಲಾಗಿರುವ ರಾಜ್ಯದ ಮೊದಲ ಅನಿಲ ವಿದ್ಯುತ್ ಉತ್ಪಾದನಾ ಘಟಕ ಜುಲೈ 2 ನೇ ವಾರದಲ್ಲಿ ಲೋಕಾರ್ಪಣೆಯಾಗಲಿದೆ ಎಂದು ಇಂಧನ ಸಚಿವ ಕೆ ಜೆ ಜಾರ್ಜ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಇಲಾಖೆ ಅಧಿಕಾರಿಗಳೊಂದಿಗೆ ನಡೆದ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ ಪ್ರಾಯೋಗಿಕ ಉತ್ಪಾದನಾ ಪ್ರಕ್ರಿಯೆ ಪೂರ್ಣಗೊಂಡಿದ್ದು, 370 ಮೆಗಾವ್ಯಾಟ್ ಸಾಮರ್ಥ್ಯದ ವಿದ್ಯುತ್ ಸ್ಥಾವರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದರು.

ರಾಜ್ಯದಲಿಯೇ ಪ್ರಥಮ ಬಾರಿಗೆ ಸರ್ಕಾರಿ ಸಂಸ್ಥೆ ಅನಿಲ ಆಧಾರಿತ ವಿದ್ಯುತ್ ಉತ್ಪಾದನೆ ವ್ಯವಸ್ಥೆ ಕಲ್ಪಿಸಿರುವುದು ಹೆಮ್ಮೆಯ ಸಂಗತಿ ಎಂದು ಸಚಿವರು ಹೇಳಿದರು.

ಎಐಆರ್/ರವಿ

ಪ್ರದೇಶ ಸಮಾಚಾರ

28.06.2024

ಯುವ ಸಾಹಿತ್ಯ ಸಮಾವೇಶ ಧಾರವಾಡ

ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ನಾಡೋಜ ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಎರಡು ದಿನಗಳ ರಾಜ್ಯ ಮಟ್ಟದ ಯುವ ಸಾಹಿತ್ಯ ಸಮಾವೇಶ ನಿನ್ನೆ ಆರಂಭಗೊಂಡಿತು. ಕಣ್ಣ ಮುಂದಿನ ಬೆಳಕು ಎಂಬ ಯುವ ಸಾಹಿತ್ಯ ಸಮಾವೇಶದ ಉದ್ಘಾಟನಾ ಕಾರ್ಯಕ್ರಮದಲ್ಲಿ ಒಟ್ಟು 105 ಮಂದಿ ಯುವ ಬರಹಗಾರರು, ಕವಿಗಳು ಭಾಗವಹಿಸಿದ್ದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಹಿರಿಯ ಸಾಹಿತಿ, ಮೈಸೂರಿನ ಡಾಕ್ಟರ್ ಓ.ಎಲ್ ನಾಗಭೂಷಣಸ್ವಾಮಿ – ಸಾಹಿತ್ಯದ ಗಟ್ಟಿತನಕ್ಕೆ ಸೃಜನಶೀಲ ಬರವಣಿಗೆಯ ಅಗತ್ಯವಿದೆ. ಯುವ ಸಾಹಿತಿಗಳು ವಿಭಿನ್ನ ಭಾಷೆಯೊಂದಿಗೆ ತಮ್ಮದೇ ಆದ ಛಂದಸ್ಸು ರೂಢಿಸಿಕೊಂಡರೆ ಉತ್ಕೃಷ್ಟ ಸಾಹಿತ್ಯ ರಚಿಸಲು ಸಾಧ್ಯ ಎಂದರು. ಪ್ರೊಫೆಸರ್ ಮಾಲತಿ ಪಟ್ಟಣಶೆಟ್ಟಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ವಿವೇಕ್/ಉಮೇಶ್/ವಿದ್ಯಾವರ್ಧಕ ಸಂಘ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

ಪ್ರದೇಶ ಸಮಾಚಾರ
28.06.2024
ಮನ್ ಕಿ ಬಾತ್

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್'ನ 111 ನೇ ಸಂಚಿಕೆಯಲ್ಲಿ, ದೇಶ, ವಿದೇಶಗಳ ಜನತೆಯೊಂದಿಗೆ, ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಭಾನುವಾರ, 30ನೇ ತಾರೀಖು ಪ್ರಸಾರವಾಗಲಿರುವ, ಮನದ ಮಾತಿಗೆ, ಟೋಲ್ ಫ್ರೀ ಸಂಖ್ಯೆ 1800–11–7800, ನಮೋ ಆ್ಯಪ್ ಅಥವಾ ಮೈ ಜಿ.ಒ.ವಿ ಡಾಟ್ ಇನ್ ಮೂಲಕ, ಜನತೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದಾಗಿದ್ದು, ಇಂದು ಕೊನೆಯ ದಿನವಾಗಿದೆ.

ಪ್ರದೇಶ ಸಮಾಚಾರ

26.06.2024

ಮಳೆ

ರಾಜ್ಯದ ಕರಾವಳಿ, ಮಲೆನಾಡು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಕೆಲವು ದಿನಗಳಿಂದ ನಿರಂತರ ಧಾರಾಕಾರ ಮಳೆಯಾಗುತ್ತಿದ್ದು, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗಿನಲ್ಲಿ ಮಳೆ ಹೆಚ್ಚಾಗಿದೆ.

ಮಡಿಕೇರಿ, ಭಾಗಮಂಡಲ ನಾಪೋಕ್ಲು ಸೇರಿದಂತೆ ಹಲವೆಡೆ ವರುಣ ಆರ್ಭಟ ಜೋರಾಗಿದ್ದು, ಬ್ರಹ್ಮಗಿರಿ ತಪ್ಪಲಿನಲ್ಲಿ ಮಳೆ ತೀವ್ರಗೊಂಡ ಹಿನ್ನೆಲೆ ಪವಿತ್ರ ಕ್ಷೇತ್ರ ಭಾಗಮಂಡಲದ ತ್ರಿವೇಣಿ ಸಂಗಮ ಭರ್ತಿಯಾಗಿದೆ. ಮಳೆ ಹೆಚ್ಚಾದರೆ ಭಾಗಮಂಡಲ–ನಾಪೋಕ್ಲು ನಡುವಿನ ರಸ್ತೆ ಸಂಪರ್ಕ ಕಡಿತವಾಗುವ ಸಾಧ್ಯತೆ ಇದೆ.

ಕೊಡಗು ಜಿಲ್ಲೆಯ ಹಲವೆಡೆ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮಡಿಕೇರಿ, ಪೊನ್ನಂಪೇಟೆ, ವಿರಾಜಪೇಟೆ, ಕುಶಾಲನಗರ ತಾಲೂಕಿನ ಪ್ರಾಥಮಿಕ ಶಾಲೆಗಳು ಹಾಗೂ ಪ್ರೌಢಶಾಲೆಗಳಿಗೆ ಆಯಾ ಕ್ಷೇತ್ರಗಳ ಶಿಕ್ಷಣಾಧಿಕಾರಿಗಳು ರಜೆ ಘೋಷಿಸಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯ ಹಲವೆಡೆ ಮಳೆರಾಯನ ಆರ್ಭಟ ಮುಂದುವರೆದಿದ್ದು, ದೆ. ಮಂಗಳೂರಿನ ಪಡೀಲು ರೈಲ್ವೇ ಬ್ರಿಡ್ಜ್ ಅಂಡರ್ ಪಾಸ್‌ನಲ್ಲಿ ನೀರು ತುಂಬಿರುವುದರಿಂದ ವಾಹನ ಸಂಚಾರ ಸ್ಥಗಿತವಾಗಿದೆ.
ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಇಂದು ಜಿಲ್ಲೆಯ ಎಲ್ಲಾ ಅಂಗನವಾಡಿ, ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಆದೇಶ ಹೊರಡಿಸಿದ್ದಾರೆ.

ಉತ್ತರಕನ್ನಡ ಜಿಲ್ಲೆಯ ಕರಾವಳಿ ಭಾಗಗಳಲ್ಲಿ ಕಳೆದ 24 ಗಂಟೆಗಳಿಂದ ವ್ಯಾಪಕ ಮಳೆಯಾಗುತ್ತಿದ್ದು, ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ಭಾರೀ ಮಳೆಗೆ ಹೊನ್ನಾವರ ತಾಲೂಕಿನ ಗೇರುಸೊಪ್ಪಾದ ಭಾಸ್ಕೇರಿ ಬಳಿ ಗುಡ್ಡ ಕುಸಿದು,  ಹೊನ್ನಾವರ–ಸಾಗರ–ಬೆಂಗಳೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ –206 ರಲ್ಲಿ ಸಂಚಾರ ಬಂದ್ ಆಗಿದೆ. ರಸ್ತೆಯ ಮೇಲೆ ಬಿದ್ದ ಮಣ್ಣನ್ನು ತೆರವುಗೊಳಿಸುವ ಕಾರ್ಯ ಪ್ರಗತಿಯಲ್ಲಿದೆ.ವಿವೇಕ್/ರವಿ/ದಕ, ಉಕ ಪಿಟಿಸಿ

ಪ್ರದೇಶ ಸಮಾಚಾರ

28.06.02024

ಕೆಂಪೇಗೌಡರ ಜಯಂತಿ

ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ 515 ನೇ ಜಯಂತಿಯನ್ನು ನಿನ್ನೆ ನಾಡಿನೆಲ್ಲೆಡೆ ವಿಜೃಂಭಣೆಯಿಂದ ಆಚರಿಸಲಾಯಿತು.

ಬೆಂಗಳೂರಿನ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಜಯಂತಿ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಕೆಂಪೇಗೌಡ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿದರು.

ಈ ಸಂದರ್ಭ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕೆಂಪೇಗೌಡರ ಸಮಾಜಮುಖಿ ಕೆಲಸಗಳು ಎಲ್ಲರಿಗೂ ಮಾದರಿಯಾಗಿದೆ. ಕೆಂಪೇಗೌಡರ ಹೆಸರಲ್ಲಿ ಪ್ರಾಧಿಕಾರ ರಚಿಸಿ ಮೊದಲ ಬಾರಿಗೆ ಸರ್ಕಾರದ ವತಿಯಿಂದ ಕೆಂಪೇಗೌಡರ ಜಯಂತಿಯನ್ನು ಈ ಹಿಂದೆ ತಮ್ಮ ಸರ್ಕಾರ ಆರಂಭಿಸಿರುವುದರ ಬಗ್ಗೆ ಹೆಮ್ಮೆ ಇದೆ. ಕೆಂಪೇಗೌಡರ ದೂರದೃಷ್ಠಿಯ ಆಡಳಿತ ತಮಗೆ ಪ್ರೇರಣೆಯಾಗಿದೆ ಎಂದರು.

ವಿಜಯನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಡೆದ ಜಯಂತಿ ಸಮಾರಂಭವನ್ನು ಜಿಲ್ಲಾಧಿಕಾರಿ ಎಂ.ಎಸ್ ದಿವಾಕರ್ ಉದ್ಘಾಟಿಸಿ ಮಾತನಾಡಿ ವೃತ್ತಿ ಆಧಾರಿತ ಪೇಟೆಗಳನ್ನು ನಿರ್ಮಿಸಿದ ಕೆಂಪೇಗೌಡರ ಮೇಲೆ ವಿಜಯನಗರ ಆಡಳಿತದ ಪ್ರಭಾವವಿತ್ತು ಎಂಬುದು ಇತಿಹಾಸದಿಂದ ವ್ಯಕ್ತವಾಗುತ್ತದೆ ಎಂದರು.

ಹುಬ್ಬಳ್ಳಿಯ ತಾಲೂಕು ಆಡಳಿತ ಸೌಧದ ಆವರಣದಲ್ಲಿ ನಾಡಪ್ರಭು ಕೆಂಪೇಗೌಡರ ಭಾವಚಿತ್ರದ ಮೆರವಣಿಗೆ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜಯಂತಿ ಆಚರಣೆಯು ಬಹಳ ಸಂಭ್ರಮದಿಂದ ಜರುಗಿತು. ಹುಬ್ಬಳ್ಳಿ ಗ್ರಾಮೀಣ ತಹಶೀಲ್ದಾರ ಪ್ರಕಾಶ ನಾಶಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಗದಗ  ಜಿಲ್ಲಾಡಳಿತ ಭವನದಲ್ಲಿ ಜರುಗಿದ ಜಯಂತಿ ಕಾರ್ಯಕ್ರಮವನ್ನು ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಉದ್ಘಾಟಿಸಿದರು.

ಶಿವಮೊಗ್ಗ ಜಿಲ್ಲಾಡಳಿತದ ವತಿಯಿಂದ ನಗರದ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಜಯಂತ್ಯುತ್ಸವ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಉದ್ಘಾಟಿಸಿದರು. ಈ ಸಂದರ್ಭ ಮಾತನಾಡಿದ ಅವರು ಕೇವಲ ರಾಜಧಾನಿ ಬೆಂಗಳೂರು ಮಾತ್ರವಲ್ಲ ಇಡೀ ರಾಜ್ಯಕ್ಕೇ ಅಡಿಪಾಯ ಹಾಕಿದವರು ಕೆಂಪೇಗೌಡರು. ದೂರದೃಷ್ಟಿಯಿಂದ ನಾಡನ್ನು ಕಟ್ಟುವಲ್ಲಿ ಅವರ ಕೊಡುಗೆ ಅಪಾರವಾಗಿದೆ ಎಂದರು.
ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಒಕ್ಕಲಿಗರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ಆಯೋಜಿತವಾಗಿತ್ತು.

ವಿವೇಕ್/ಉಮೇಶ್/ಕ.ವಿ.ವಾ/ಗದಗ ಪಿಟಿಸಿ/ವಿಜಯನಗರ ಸಿದ್ದರಾಮಯ್ಯ ಎಕ್ಸ್ ಖಾತೆ

ಪ್ರದೇಶ ಸಮಾಚಾರ

ಚಿತ್ರದುರ್ಗ ಡಿಸಿ

ಶಾಲೆಯಿಂದ ಹೊರಗುಳಿದ ಮಕ್ಕಳ ತಾಲ್ಲೂಕುವಾರು ಮಾಹಿತಿ ಸಂಗ್ರಹಿಸಿ ವಾರದೊಳಗೆ ವರದಿ ನೀಡಬೇಕು ಎಂದು ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಚಿತ್ರದುರ್ಗ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಿನ್ನೆ ನಡೆದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲ್ಯವಿವಾಹ, ಬಾಲ ಕಾರ್ಮಿಕರಾಗುವ ಸಾಧ್ಯತೆ ಇರುವುದರಿಂದ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಪೂರ್ಣ ಮಾಹಿತಿಯನ್ನು ಸಂಗ್ರಹಿಸಿ, ಅವರನ್ನು ಮುಖ್ಯವಾಹಿನಿಗೆ ತರುವ ಕೆಲಸವಾಗಬೇಕು. ಜಿಲ್ಲೆಯಲ್ಲಿ ಯಾವುದೇ ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ಕ್ರಮವಹಿಸಬೇಕು ಎಂದು ಸೂಚಿಸಿದರು.

ಪಿಟಿಸಿ ಚಿತ್ರದುರ್ಗ/ರವಿ

ಸಂಕ್ಷಿಪ್ತ ಸುದ್ದಿಗಳು

–ಆಕಾಶವಾಣಿ ಭದ್ರಾವತಿಯ ವಜ್ರಮಹೋತ್ಸವ ವ ರ್ಷಾಚರಣೆ ಸಂದರ್ಭದಲ್ಲಿ ಶಿವಮೊಗ್ಗದ ಪಿಇಎಸ್ ಸಮೂಹ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ SSLC, PUC ಹಾಗೂ ಪದವಿ ಪಡೆಯುವವರು ಉತ್ತಮ ಕೋರ್ಸ ಆಯ್ಕೆ ಕುರಿತ ಕಾರ್ಯಕ್ರಮ ಸರಣಿ ಇಂದಿನಿಂದ ಪ್ರತಿ ಶುಕ್ರವಾರ ಬೆಳಿಗ್ಗೆ 9.05 ರಿಂದ 9.20 ರವರೆಗೆ ವ ರ್ಷಪೂರ್ತಿ ಪ್ರಸಾರವಾಗಲಿದೆ.

–ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಶಾಲಾ ಶಿಕ್ಷಣ ಇಲಾಖೆ ಪದವಿಪೂರ್ವ ಸಹಯೋಗದಲ್ಲಿ ನಾಳೆ ಬೆಳಗ್ಗೆ 9.30 ಕ್ಕೆ ನಗರದ ಕುವೆಂಪು ರಂಗಮಂದಿರದಲ್ಲಿ ಕೃಷಿ ಶಿಕ್ಷಣ ಸುಗ್ಗಿ–2024 ಕಾರ್ಯಕ್ರಮ ಆಯೋಜಿಸಲಾಗಿದೆ.

ಕೇಂದ್ರದ ಪೋ ಣ್ ಅಭಿಯಾನದಡಿ, ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲೂಕು, ಮೇಲೂರು ಗ್ರಾಮದಲ್ಲಿ, 344 ಅಂಗನವಾಡಿ ಕಾರ್ಯಕರ್ತೆಯರಿಗೆ, ಶಾಸಕ ಬಿ.ಎನ್.ರವಿಕುಮಾರ್ ಮೊಬೈಲ್ ವಿತರಿಸಿದರು.

ದಾವಣಗೆರೆ ಜಿಲ್ಲೆಯಲ್ಲಿ, ಪ್ರಸ್ತುತ 595 ಕೆರೆಗಳಿದ್ದು, ಪ್ರಾದೇಶಿಕ ಅರಣ್ಯ ಇಲಾಖೆ ವ್ಯಾಪ್ತಿಯಲ್ಲಿ, 36 ಕೆರೆಗಳಿವೆ. ಅವುಗಳ ಪುನರುಜ್ಜೀವನಕ್ಕೆ ನೀಲ ನಕ್ಷೆ ಸಿದ್ಧವಾಗುತ್ತಿದೆ ಎಂದು, ಜಿಲ್ಲಾಧಿಕಾರಿ ವೆಂಕಟೇಶ್ ತಿಳಿಸಿದ್ದಾರೆ.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ರಾಜ್ಯದ ಅಭಿವೃದ್ಧಿ ಯೋಜನೆಗಳ ಬಗ್ಗೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ–ಇಂದು ವಿವಿಧ ಕೇಂದ್ರ ಸಚಿವರ ಭೇಟಿ
- ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಕೃಷಿಯ ಕೊಡುಗೆ ಅಮೂಲ್ಯ–ರಾಜ್ಯಪಾಲ ಥಾವರಚಂದ್ ಗೆಹ್ಲೋಟ್
- ಸಡಗರ, ಸಂಭ್ರಮದೊಂದಿಗೆ ರಾಜ್ಯಾದ್ಯಂತ ನಿನ್ನೆ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ
- ರಾಜ್ಯದ ವಿವಿಧೆಡೆ ಮುಂದುವರಿದ ಮಳೆ– ಜನಜೀವನ ಅಸ್ತವ್ಯಸ್ತ

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>